ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೈಗಾರಿಕಾ ನಿವೇಶನಗಳ ಶುದ್ಧಕ್ರಯ ಪತ್ರ ನೆರವೇರಿಸಲು ನಿಗಧಿಪಡಿಸಿದ ಅಂತಿಮ ಬೆಲೆ ಕಡಿಮೆ ಮಾಡುವ ಕುರಿತು

ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ):-

136 (117) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗದಗ ಜಿಲ್ಲೆ, ನರಸಾಪುರ ಕೈಗಾರಿಕೆ ಪ್ರದೇಶದಲ್ಲಿ ಒಂದು ವರ್ಷದ ಹಿಂದೆ ಹಂಚಿಕೆಯಾಗಿ "ಲೀಸ್ ಕಮ್ ಸೇಲ್ ಡೀಡ್" ಮಾಡುವಾಗ 1 ಎಕರೆಗೆ ರೂ.10 ಲಕ್ಷದಂತೆ ನಿಗದಿಪಡಿಸಿದ್ದು, ಅಕ್ಟೋಬರ್ ತಿಂಗಳಲ್ಲಿ 6 ರಿಂದ 10 ಪಟ್ಟು ಅಂತಿಮ ದರವನ್ನು ಹೆಚ್ಚಿಸಿ ಸಂಬಂಧಪಟ್ಟವರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ನೋಟಿಸ್ ಜಾರಿ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ, ಅವರು ಹೆಚ್ಚಿಗೆ ಮಾಡಿರುವ ದರವನ್ನು ಕಡಿಮೆ ಮಾಡಿ ಉದ್ಯೋಗ ಸ್ಥಾಪನೆಗೆ ಅನುಕೂಲ ಮಾಡಿಕೊಡಲು ಮನವಿ ಸಲ್ಲಿಸಿದ್ದು ನಿಜವೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ?